File No.MGC/CRM3/MSC/7/2022-C3-COP-MGC

KARNATAKA STATE POLICE

# ಪೊಲೀಸ್ ಆಯುಕ್ತರು, ಮಂಗಳೂರು ನಗರ ರವರ ನಡವಳಿಗಳು

ವಿಷಯ : ಮಂಗಳೂರು ಸ್ಮಾರ್ಟ್ ಸಿಟಿ ಯೋಜನೆ ಅಡಿಯಲ್ಲಿ ಅಂಬೇಡ್ಕರ್ ವೃತ್ತದಿಂದ ಫಳ್ನೀರ್ ರಸ್ತೆವರೆಗೆ ಒಳಚರಂಡಿ ಕಾಮಗಾರಿ ನಡೆಯುವ ಸಮಯ ವಾಹನ ಸಂಚಾರವನ್ನು ನಿಷೇಧಿಸಿ ತಾತ್ಕಾಲಿಕ ಅಧಿಸೂಚನೆ ಹೊರಡಿಸುವ ಕುರಿತು.

ಉಲ್ಲೇಖ: 1) ಮಂಗಳೂರು ಸ್ಮಾರ್ಟ್ ಸಿಟಿರವರ ಪತ್ರ ಸಂ : MSCL/TECH/EE-1/AEE-1/AE-9/CR-32/2020-21/1293 ದಿನಾಂಕ: 22-03-2022

2) ಸಹಾಯಕ ಪೊಲೀಸ್ ಆಯುಕ್ತರು, ಮಂಗಳೂರು ಸಂಚಾರ ಉಪವಿಭಾಗ, ಮಂಗಳೂರು ನಗರ ರವರ ವರದಿ ಸಂಖ್ಯೆ: 15/ಸಿಸಿಆರ್/ಎಸಿಪಿ ಸಂಚಾರ/2022 ದಿನಾಂಕ : 27-03-2022

**********

ಪ್ರಸ್ತಾವನೆ:

ಮಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯ ಅಂಬೇಡ್ಕರ್ ವೃತ್ತದಿಂದ ಫಳ್ನೀರ್ ರಸ್ತೆವರೆಗೆ ಒಳಚರಂಡಿ ಕಾಮಗಾರಿ ಕೈಗೊಳ್ಳುವ ವೇಳೆ ವಾಹನ ಸಂಚಾರ ನಿಷೇಧಿಸಿ ಬದಲಿ ಮಾರ್ಗದಲ್ಲಿ ಸಂಚಾರ ಮಾರ್ಪಾಡು ಮಾಡಿ ಆದೇಶಿಸುವಂತೆ ಉಲ್ಲೇಖಿತ (1) ರಲ್ಲಿ ಕಾರ್ಯಪಾಲಕ ಅಭಿಯಂತರರು, ಮಂಗಳೂರು ಸ್ಮಾರ್ಟ್ ಸಿಟಿ ಲಿಮಿಟೆಡ್ ಮಂಗಳೂರು ನಗರ ರವರು ಕೋರಿಕೊಂಡಿರುತ್ತಾರೆ.

ಮಂಗಳೂರು ಸ್ಮಾರ್ಟ್ ಸಿಟಿರವರ ಕೋರಿಕೆಯನ್ನು ಸಹಾಯಕ ಪೊಲೀಸ್ ಆಯುಕ್ತರು , ಸಂಚಾರ ಉಪವಿಭಾಗ, ಮಂಗಳೂರು ನಗರ ರವರು ಸಲ್ಲಿಸಿದ ವರದಿಯನ್ನು ಪರಿಶೀಲಿಸಲಾಗಿದೆ. ಸದರಿಯವರು ಸಲ್ಲಿಸಿದ ವರದಿಯ ಅನ್ವಯ ಮಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯ ಅಂಬೇಡ್ಕರ್ ವೃತ್ತದಿಂದ ಫಳ್ನೀರ್ ರಸ್ತೆವರೆಗೆ ಒಳಚರಂಡಿ ಕಾಮಗಾರಿ ಕೈಗೊಳ್ಳಲಾಗುವುದರಿಂದ ಸದ್ರಿ ರಸ್ತೆಯಲ್ಲಿ ವಾಹನ ಸಂಚಾರ ನಿಷೇಧದ ಆದೇಶ ಹೊರಡಿಸುವುದರ ಜೊತೆಯಲ್ಲಿ ಸಾರ್ವಜನಿಕರ ಓಡಾಟಕ್ಕೆ ಮತ್ತು ವಾಹನಗಳ ಸುಗಮ ಸಂಚಾರಕ್ಕಾಗಿ ಬದಲಿ ಮಾರ್ಗದ ವ್ಯವಸ್ಥೆ ಮಾಡಬೇಕಾದ ಅವಶ್ಯಕತೆ ಇರುವುದನ್ನು ಮನಗಂಡು ಕಾಮಗಾರಿ ಮುಕ್ತಾಯದ ತನಕ ಎನ್, ಶಶಿಕುಮಾರ್ ಐ.ಪಿ.ಎಸ್, ಪೊಲೀಸ್ ಆಯುಕ್ತರು, ಹಾಗೂ ಅಪರ ದಂಡಾಧಿಕಾರಿಗಳು, ಮಂಗಳೂರು ನಗರ ಆದ ನಾನು ಮೋಟಾರು ವಾಹನ ಕಾಯ್ದೆ 1988 ರ ಕಲಂ 115 ರಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಅಂಬೇಡ್ಕರ್ ವೃತ್ತದಿಂದ ಫಳ್ನೀರ್ ರಸ್ತೆವರೆಗೆ ದಿನಾಂಕ :

19 -04-2022 ರಿಂದ 08 -05-2022 ರವರೆಗೆ 20 ದಿನಗಳ ಕಾಲ ವಾಹನಗಳ ಸಂಚಾರದಲ್ಲಿ ತಾತ್ಕಾಲಿಕವಾಗಿ ಬದಲಾವಣೆ ಮಾಡಿ, ಈ ಕೆಳಕಂಡ ಷರತ್ತುಗಳೊಂದಿಗೆ ಆದೇಶಿಸಿರುತ್ತೇನೆ.

ಷರತ್ತುಗಳು:

1. ಕಾಮಗಾರಿ ನಡೆಯುವ ಸ್ಥಳದಲ್ಲಿ ಸೂಕ್ತ ಬೆಳಕಿನ ವ್ಯವಸ್ಥೆ ಮಾಡುವುದು.
2. ಕಾಮಗಾರಿ ಪ್ರಾರಂಭ ಮತ್ತು ಮುಗಿಸುವ ದಿನಾಂಕದ ಫಲಕ ಹಾಗೂ ಬ್ಯಾರಿಕೇಡ್/ಡೈವರ್ಶನ್ ಬೋರ್ಡ್ ಗಳನ್ನು ಕಾಮಗಾರಿ ನಡೆಯುವ ಸ್ಥಳದಲ್ಲಿ ಅಳವಡಿಸುವುದು.

3. ಕಾಮಗಾರಿ ನಡೆಸುವ ಉಸ್ತುವಾರಿ ಇಂಜಿನಿಯರ್ ಹಾಗೂ ಕಂಟ್ರಾಕ್ಟರ್ ರವರ ಹೆಸರು ಮತ್ತು ಮೊಬೈಲ್ ದೂರವಾಣಿ ಸಂಖ್ಯೆಯನ್ನು ಸದ್ರಿ ಫಲಕದಲ್ಲಿ ನಮೂದಿಸುವುದು.
4. ಕಾಮಗಾರಿ ನಡೆಸುವ ಸಮಯ ಸೂಕ್ತ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳುವುದು.
5. ಮಾನ್ಯ ಸರ್ವೋಚ್ಚ ನ್ಯಾಯಾಲಯ ಮತ್ತು ಮಾನ್ಯ ಉಚ್ಚ ನ್ಯಾಯಾಲಯಗಳು ನಿರ್ದೇಶಿಸಿರುವ ರಸ್ತೆ ಕಾಮಗಾರಿ ವೇಳೆ ಕೈಗೊಳ್ಳಬೇಕಾಗಿರುವ ಎಲ್ಲಾ ಸುರಕ್ಷತಾ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳುವುದು.

ಈ ಮೇಲಿನ ಎಲ್ಲಾ ಷರತ್ತುಗಳಿಗೆ ಒಳಪಟ್ಟು ಮಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯ ನೂರ್ ಮಸೀದಿ ರಸ್ತೆ ಅಭಿವೃದ್ಧಿ ಕಾಮಗಾರಿಯನ್ನು ನಡೆಸುವ ಸಮಯ ಈ ಕೆಳಗಿನಂತೆ ವಾಹನಗಳ ಸಂಚಾರದಲ್ಲಿ ತಾತ್ಕಾಲಿಕವಾಗಿ ಮಾರ್ಪಾಡು ಮಾಡಿ ಈ ಕೆಳಕಂಡಂತೆ ಅಧಿಸೂಚನೆ ಹೊರಡಿಸಲಾಗಿದೆ.

## ಆದೇಶ

ಸಿಆರ್ ಎಂ-3/09/ ಅಧಿಸೂಚನೆ/ ಮಂ.ನ/ 2022 ದಿನಾಂಕ:19/04/2022

1. ಅಂಬೇಡ್ಕರ್ ವೃತ್ತದಿಂದ ಅವೇರಿ ಜಂಕ್ಷನ್ ಕಡೆಗೆ ಹೋಗುವ ನ್ಯೂ ಬಲ್ಮಠ ರಸ್ತೆಯಲ್ಲಿ ಎಲ್ಲಾ ರೀತಿಯ ವಾಹನಗಳ ಸಂಚಾರವನ್ನು ನಿಷೇಧಿಸಲಾಗಿದೆ.
2. ಅಂಬೇಡ್ಕರ್ ವೃತ್ತದಿಂದ ಅವೇರಿ ಜಂಕ್ಷನ್ ಕಡೆಗೆ ಹೋಗುವ ಎಲ್ಲಾ ವಾಹನಗಳು ಅಂಬೇಡ್ಕರ್ ಸರ್ಕಲ್ ನಲ್ಲಿ ಮುಂದಕ್ಕೆ ಚಲಿಸಿ ಡಾನ್ ಬಾಸ್ಕೋ ಹಾಲ್ ಕ್ರಾಸ್ ನಿಂದಾಗಿ ಅವೇರಿ ಜಂಕ್ಷನ್ ತಲುಪಿ ಮುಂದಕ್ಕೆ ಸಂಚರಿಸುವುದು.
3. ಅವೇರಿ ಜಂಕ್ಷನ್ ನಿಂದ ಅಂಬೇಡ್ಕರ್ ವೃತ್ತದ ಕಡೆಗೆ ಹೋಗುವ ಎಲ್ಲಾ ವಾಹನಗಳು ಅಥೆನಾ ಆಸ್ಪತ್ರೆ ರಸ್ತೆಯ ಮೂಲಕ ಬಲ್ಮಠ ತಲುಪಿ ಅಲ್ಲಿಂದ ಅಂಬೇಡ್ಕರ್ ವೃತ್ತದ ಕಡೆಗೆ ಚಲಿಸುವುದು

ಈ ಅಧಿಸೂಚನೆಯು ದಿನಾಂಕ:19/04/2022 ರಿಂದ ದಿನಾಂಕ:08/05/2022 ರವರೆಗೆ ಊರ್ಜಿತದಲ್ಲಿರುತ್ತದೆ.

ಈ ಆದೇಶದನ್ವಯ ಸದ್ರಿ ರಸ್ತೆಯಲ್ಲಿ ಅವಶ್ಯವುಳ್ಳ ಸೂಕ್ತ ಸೂಚನಾ ಫಲಕಗಳನ್ನು ಮಂಗಳೂರು ಸ್ಮಾರ್ಟ್ ಸಿಟಿ ವತಿಯಿಂದ ಅಳವಡಿಸುವುದು ಹಾಗೂ ಸುಗಮ ಸಂಚಾರ ನಿಯಂತ್ರಣಕ್ಕೆ ಸೂಕ್ತ ಸಿಬ್ಬಂದಿಗಳನ್ನು ನಿಯೋಜಿಸಿ ಈ ಆದೇಶ ಅನುಷ್ಠಾನಗೊಳಿಸಲು ಸಹಾಯಕ ಪೊಲೀಸ್ ಆಯುಕ್ತರು, ಮಂಗಳೂರು ಸಂಚಾರ ಉಪ ವಿಭಾಗ, ಮಂಗಳೂರು ನಗರ ರವರು ಅಧಿಕಾರವುಳ್ಳವರಾಗಿರುತ್ತಾರೆ.

ಈ ಆದೇಶವನ್ನು ದಿನಾಂಕ:19-04-2022 ರಂದು ನನ್ನ ಸ್ವ ಹಸ್ತ ಸಹಿ ಹಾಗೂ ಮುದ್ರೆಯೊಂದಿಗೆ ಹೊರಡಿಸಿರುತ್ತೇನೆ.

Digitally Signed by
Shashikumar N
Date: 19-04-2022 12:16:11
Reason: Approved
(ಎನ್, ಶಶಿಕುಮಾರ್ ಐ.ಪಿ.ಎಸ್.,)
ಪೊಲೀಸು ಆಯುಕ್ತರು ಹಾಗೂ ಅಡಿಷನಲ್ ಡಿಸ್ಟ್ರಿಕ್ಟ್ ಮ್ಯಾಜಿಸ್ಟ್ರೇಟ್
ಮಂಗಳೂರು ನಗರ, ಮಂಗಳೂರು

ಪೊಲೀಸು ಆಯುಕ್ತರು
ಮಂಗಳೂರು ನಗರ, ಮಂಗಳೂರು

ಇವರಿಗೆ:

1. ಜಿಲ್ಲಾಧಿಕಾರಿಯವರು, ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು ಇವರಿಗೆ ಮಾಹಿತಿಗಾಗಿ.
2. ಪ್ರಾದೇಶಿಕ ಸಾರಿಗೆ ಅಧಿಕಾರಿ, ದ.ಕ. ಮಂಗಳೂರು ಇವರಿಗೆ ಮಾಹಿತಿ ಹಾಗೂ ಸೂಕ್ತ ಕ್ರಮಕ್ಕಾಗಿ.
3. ಅಭಿಯಂತರರು, ಮಂಗಳೂರು ಮಹಾನಗರ ಪಾಲಿಕೆ, ಮಂಗಳೂರು
4. ವ್ಯವಸ್ಥಾಪಕ ನಿರ್ದೇಶಕರು, ಮಂಗಳೂರು ಸ್ಮಾರ್ಟ್ ಸಿಟಿ, ಮಂಗಳೂರು ರವರಿಗೆ ಸೂಕ್ತ ಕ್ರಮಕ್ಕಾಗಿ

5. ಸಹಾಯಕ ಕಮೀಷನರ್, ಮಂಗಳೂರು.
6. ತಹಶೀಲ್ದಾರ್, ಮಂಗಳೂರು ಇವರಿಗೆ ಮಾಹಿತಿಗಾಗಿ.
7. ಆಯುಕ್ತರು, ಮಂಗಳೂರು ಮಹಾನಗರಪಾಲಿಕೆ ಇವರಿಗೆ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.
8. ಜಿಲ್ಲಾ ವಾರ್ತಾ ಮತ್ತು ಪ್ರಚಾರಾಧಿಕಾರಿಗಳು, ದ.ಕ. ಮಂಗಳೂರು ಇವರಿಗೆ ಈ ಅಧಿಸೂಚನೆಯನ್ನು ಜಿಲ್ಲೆಯ ವಾರ್ತಾ ಮಾಧ್ಯಮಗಳಲ್ಲಿ ವಾರ್ತಾ ರೂಪದಲ್ಲಿ ಉಚಿತವಾಗಿ ಪ್ರಚಾರ ಪಡಿಸಲು ಕೋರಿದೆ.
9. ವಿಭಾಗೀಯ ನಿಯಂತ್ರಣಾಧಿಕಾರಿ, ಕೆ.ಎಸ್. ಆರ್. ಟಿ .ಸಿ ಮಂಗಳೂರು.
10. ಪೊಲೀಸ್ ಅಧೀಕ್ಷಕರು ,ದ.ಕ ಜಿಲ್ಲೆ ಮಂಗಳೂರು
11. ಉಪ ಪೊಲೀಸು ಆಯುಕ್ತರು (ಅಪರಾಧ ಮತ್ತು ಸಂಚಾರ) ಮಂಗಳೂರು ನಗರ.
12. ಉಪ ಪೊಲೀಸು ಆಯುಕ್ತರು (ಕಾ ಮತ್ತು ಸು) ಮಂಗಳೂರು ನಗರ.
13. ಉಪ ಪೊಲೀಸು ಆಯುಕ್ತರು ಸಿ.ಎ.ಆರ್, ಮಂಗಳೂರು ನಗರ.
14. ಸಹಾಯಕ ಪೊಲೀಸ್ ಆಯುಕ್ತರು, ಮಂಗಳೂರು ಸಂಚಾರ ಉಪ ವಿಭಾಗ ಇವರಿಗೆ
15. ಪೊಲೀಸ್ ನಿರೀಕ್ಷಕರು, ಸಂಚಾರ ಪಶ್ಚಿಮ, ಪೊಲೀಸ್ ಠಾಣೆ, ಮಂಗಳೂರು ನಗರ